**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ,**
**ಶ್ರೀರಂಗಪಟ್ಟಣ.**

ಸಿ.ಸಿ.ಃ 632/2021

ಸಿ. ಡಬ್ಲ್ಯು: 3
ಪಿ. ಡಬ್ಲ್ಯು: 4

| | | |
|---|---|---|
| ಸಾಕ್ಷಿದಾರರ ಹೆಸರು | ಃ | ಸುರೇಶ್ |
| ತಂದೆ/ಪತಿಯ ಹೆಸರು | ಃ | ಮಾದಯ್ಯ |
| ವಯಸ್ಸು | ಃ | 54 ವರ್ಷ |
| ವೃತ್ತಿ | ಃ | ವ್ಯವಸಾಯ |
| ವಾಸ | ಃ | ಅರಕೆರೆ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕಃ 17.12.2024.**
**ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ರವರಿಂದ**

ನನಗೆ ಚಾಸಾ-2 ರವರ ಪರಿಚಯ ಇರುತ್ತದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೋಲೀಸರು ಮಹಜರ್ ಗೆ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ. ಪೋಲೀಸರು ಸಹಿ ಮಾಡು ಎಂದು ಹೇಳಿದ್ದರಿಂದ ನಾನು ಸಹಿ ಮಾಡಿರುತ್ತೇನೆ. ಸಾಕ್ಷಿಗೆ ಈಗ ಪಂಚನಾಮೆಯನ್ನು ತೋರಿಸಿದ್ದು, ಅದರಲ್ಲಿ ಇರುವ ಅವರ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಸ.ಸ.ಅ. ಅವರು ಸದರಿ ಸಾಕ್ಷಿಯನ್ನು ಪ್ರತೀಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡುವಂತೆ ಕೋರಿಕೊಂಡಿದ್ದು, ಆಲಿಸಿ ಅನುಮತಿ ನೀಡಲಾಯಿತು).

**ಪಾಟಿ ಸವಾಲುಃ ಮಾನ್ಯ ಸ.ಸ.ಅ ರವರಿಂದ**

ದಿಃ 30.03.2021 ರಂದು ಪೋಲೀಸರು ನನ್ನನ್ನು ಹಾಗೂ ಚಾಸಾ-2 ರವರನ್ನು ಅಕ್ರಮ ಮದ್ಯ ದಾಳಿ ಸಂಬಂಧ ಪಂಚನಾಮೆ ಮಾಡುವ ಸಲುವಾಗಿ ಕರೆದಿರುತ್ತಾರೆ ಎಂದರೆ ಸರಿಯಲ್ಲ. ಅದಕ್ಕೆ ನಾನು ಮತ್ತು ಚಾಸಾ-2 ರವರು ಒಪ್ಪಿಕೊಂಡೆವು ಎಂದರೆ ಸರಿಯಲ್ಲ. ನಂತರ ನಾನು ಮತ್ತು ಚಾಸಾ-2 ರವರು ಪೊಲೀಸರ ಜೊತೆ ಘಟನಾ ಸ್ಥಳಕ್ಕೆ ಹೋಗಿದ್ದು, ಅಲ್ಲಿ ಪೋಲೀಸರು ದಾಳಿ ಮಾಡಿದ್ದು, ನಂತರ ಪೊಲೀಸರು ನಮ್ಮ ಸಮಕ್ಷಮ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಾವು ಸದರಿ ಪಂಚನಾಮೆಗೆ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ.

ಪೋಲೀಸರು ಘಟನಾ ಸ್ಥಳದಲ್ಲಿ ಅಕ್ರಮ ಮಧ್ಯಗಳನ್ನು ನನ್ನ ಸಮಕ್ಷಮ ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ಘಟನೆ ಸಂಬಂಧ ನಾನು ಪೊಲೀಸರ ಮುಂದೆ ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷ್ಮಿ ಹೇಳಿಕೆ ನೀಡಿಲ್ಲ ಎಂದು ತಿಳಿಸಿದ್ದರಿಂದ ಹೇಳಿಕೆಯನ್ನು ಅಭಿಯೋಜನೆಯ ಪರವಾಗಿ ನಿಪಿ.4 ಎಂದು, ಅದರ ಆಯ್ದ ಭಾಗವನ್ನು ನಿಪಿ.4(ಎ) ಎಂದು ಗುರುತಿಸಲಾಯಿತು. ನನಗೆ ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದ್ದರೂ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀಸವಾಲು : ಆರೋಪಿ ಪರ ವಕೀಲರಿಂದ**

ಆರೋಪಿ ಪರ ವಕೀಲರು ಪಾಟೀಸವಾಲು ಇಲ್ಲಎಂದು ತಿಳಿಸಿದ್ದರಿಂದ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.